Akashvani: Bangalore
Regional Bulletin In Kannada
21.08.2025 : 14.30 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

21.08.2025 : 14.30 hrs

*******

**ಮುಖ್ಯಾಂಶಗಳು :**

1. ಮೈಸೂರು ದಸರಾದಲ್ಲಿ ಏರ್ ಶೋಗೆ ಅನುಮತಿ; ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಮುಖ್ಯಮಂತ್ರಿ ಧನ್ಯವಾದ
2. ಕರ್ನಾಟಕ ಜನಸಂದಣಿ ನಿಯಂತ್ರಣ ನಿರ್ವಹಣೆ ವಿಧೇಯಕ-೨೦೨೫ ಸದನ ಸಮಿತಿಗೆ ನೀಡಿದ ಸರ್ಕಾರ
3. ವಿಧಾನಸಭೆಯಲ್ಲಿ ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ವಿಧೇಯಕ ಅಂಗೀಕಾರ
4. ಬೆಂಗಳೂರಿನಲ್ಲಿ ಗಣೇಶೋತ್ಸವ ಸಂದರ್ಭದಲ್ಲಿ ಪಿಒಪಿ ಗಣೇಶ ಮಾರಾಟ ಮಾಡಿದರೆ ಕ್ರಿಮಿನಲ್ ಮೊಕದ್ದಮೆ
5. ತುಂಗಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಭಾರೀ ಮಳೆ; ಹಂಪಿಯ ಪುರಂದರ ಮಂಟಪ ಸೇರಿದಂತೆ ಹಲವು ಸ್ಮಾರಕಗಳು ಮುಳುಗಡೆ

******

ನಾಡಹಬ್ಬ ಮೈಸೂರು ದಸರಾ ಮಹೋತ್ಸವದಲ್ಲಿ ವೈಮಾನಿಕ ಪ್ರದರ್ಶನ ಆಯೋಜಿಸಲು ಅನುಮತಿ ನೀಡಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ. ದಸರಾದಲ್ಲಿ ಪಾಲ್ಗೊಳ್ಳುವಂತೆ ರಾಜನಾಥ್ ಸಿಂಗ್ ಅವರನ್ನು ಆತ್ಮೀಯವಾಗಿ ಆಹ್ವಾನಿಸಿದ್ದಾರೆ. ವೈಮಾನಿಕ ಪ್ರದರ್ಶನವು ಐತಿಹಾಸಿಕ ಉತ್ಸವದ ಭವ್ಯತೆಗೆ ಹೆಚ್ಚಿನ ನೆರವು ನೀಡುವುದಲ್ಲದೆ, ಲಕ್ಷಾಂತರ ಜನರಲ್ಲಿ ದೇಶಭಕ್ತಿಯ ಭಾವವನ್ನು ತುಂಬುತ್ತದೆ ಎಂದು ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ. ತಮ್ಮ ಉಪಸ್ಥಿತಿಯು ಸಶಸ್ತ್ರ ಪಡೆಗಳ ಬಗ್ಗೆ ಹೊಂದಿರುವ ಗೌರವ ಮತ್ತು ಮೆಚ್ಚುಗೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ರಾಜನಾಥ್ ಸಿಂಗ್ ಅವರನ್ನು ಖುದ್ದು ಭೇಟಿ ಮಾಡಿ, ಏರ್ ಶೋ ನಡೆಸಲು ಅನುಮತಿ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನವಿ ಮಾಡಿದ್ದರು.

******

ಸಭೆ ಸಮಾವೇಶ ಹೆಸರಿನಲ್ಲಿ ಸಾವಿರಾರು ಜನರನ್ನು ಸೇರಿಸಿದಾಗ ಸಾವು ಸಂಭವಿಸಿದರೆ ಸಂಘಟಕರಿಗೆ ಜೀವಾವಧಿ ಶಿಕ್ಷೆ ನೀಡುವ ಕರ್ನಾಟಕ ಜನಸಂದಣಿ ನಿಯಂತ್ರಣ ನಿರ್ವಹಣೆ ವಿಧೇಯಕ ೨೦೨೫ನ್ನು ವಿಧಾನಸಭೆಯಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮಂಡಿಸಿದ್ದಾರೆ. ಈ ವಿಧೇಯಕಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ ಪ್ರತಿಪಕ್ಷಗಳು ತರಾತುರಿಯಲ್ಲಿ ವಿಧೇಯಕ ಅಂಗೀಕರಿಸದಂತೆ ಮನವಿ ಮಾಡಿದರು. ಪ್ರತಿಪಕ್ಷಗಳ ಸದಸ್ಯರ ಒತ್ತಡಕ್ಕೆ ಮಣಿದ ಗೃಹ ಸಚಿವ ಡಾ ಜಿ.ಪರಮೇಶ್ವರ್ ವಿಧೇಯಕವನ್ನು ಸದನ ಸಮಿತಿಗೆ ಒಪ್ಪಿಸಿದರು. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ನಡೆದ ಕಾಲ್ತುಳಿತದಿಂದ ಉಂಟಾದ ದುರಂತದಲ್ಲಿ ಹನ್ನೊಂದು ಮಂದಿ ಸಾವನಪ್ಪಿದ ಘಟನೆ ಹಿನ್ನೆಲೆಯಲ್ಲಿ ಈ ವಿಧೇಯಕವನ್ನು ಮಂಡಿಸಲಾಗಿದೆ. ಕಾನೂನುಬಾಹಿರವಾಗಿ ಜನಸಂದಣಿ ಸೇರುವುದಕ್ಕೆ ಈ ಮಸೂದೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದರು. ಧಾರ್ಮಿಕ ಕಾರ್ಯಕ್ರಮಗಳು, ಜಾತ್ರೆಗಳು, ಸರ್ಕಾರಿ ಕಾರ್ಯಕ್ರಮಗಳು, ಮದುವೆ, ಕೌಟುಂಬಿಕ ಸಮಾರಂಭಗಳಿಗೆ ಈ ಕಾನೂನು ಅನ್ವಯಿಸುವುದಿಲ್ಲ ಎಂದು ಹೇಳಿದರು. ಅನುಮತಿ ಪಡೆಯದೆ ಕಾರ್ಯಕ್ರಮಗಳು ಅಥವಾ

ಸಮಾರಂಭಗಳನ್ನು ಆಯೋಜಿಸಿದರೆ ಕನಿಷ್ಠ ಮೂರು ವರ್ಷಗಳಿಂದ ಏಳು ವರ್ಷಗಳ ತನಕ ಜೈಲು ಶಿಕ್ಷೆ ಅಥವಾ ಒಂದು ಕೋಟಿ ರೂಪಾಯಿ ದಂಡ ವಿಧಿಸಲು ಅವಕಾಶವಿದೆ ಎಂದು ಸಚಿವ ಪರಮೇಶ್ವರ್ ಸದನಕ್ಕೆ ಮಾಹಿತಿ ನೀಡಿದರು. ಬಸನಗೌಡ ಪಾಟೀಲ್ ಯತ್ನಾಳ್ ಮಾತನಾಡಿ ಜನಪರ ಹೋರಾಟ ಹತ್ತಿಕ್ಕಲು ಈ ಮಸೂದೆ ತರಲಾಗಿದೆ. ತರಾತುರಿಯಲ್ಲಿ ವಿಧೇಯಕ ಅಂಗೀಕರಿಸಬಾರದು ಎಂದು ಹೇಳಿದರು. ಪ್ರತಿಪಕ್ಷಗಳ ಒತ್ತಡಕ್ಕೆ ಮಣಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧೇಯಕವನ್ನು ಸದನ ಸಮಿತಿಗೆ ಒಪ್ಪಿಸಿದರು.

******

ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ವಿಧೇಯಕ ೨೦೨೫ಕ್ಕೆ ವಿಧನಾಸಭೆಯಲ್ಲಿ ಧ್ವನಿಮತದಿಂದ ಅಂಗೀಕಾರ ದೊರೆತಿದೆ. ವಿಧೇಯಕ ಮಂಡಿಸಿ ಮಾತನಾಡಿದ ಪಶುಸಂಗೋಪನೆ ಇಲಾಖೆ ಸಚಿವ ಕೆ.ವೆಂಕಟೇಶ್ ಈ ಮಸೂದೆಯಿಂದ ಕುರಿಗಾಹಿಗಳ ವಿರುದ್ಧ ನಡೆಯುವ ದೌರ್ಜನ್ಯ ತಡೆಗಟ್ಟಲು ಸಹಾಯಕವಾಗುವುದಲ್ಲದೆ ಅವರ ಆರ್ಥಿಕ ಸಬಲೀಕರಣಕ್ಕೂ ನೆರವಾಗಲಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರವು ಸಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ಕ್ಷೇಮಾಭಿವೃದ್ಧಿಗೆ ಹಲವಾರು ಯೋಜನೆಗಳನ್ನು ಕಾಲ ಕಾಲಕ್ಕೆ ರೂಪಿಸುತ್ತಿದ್ದು ಅದರ ಲಾಭ ಪಡೆಯಲು ಈ ಮಸೂದೆ ಅನುಕೂಲ ಕಲ್ಪಿಸಲಿದೆ. ಕುರಿಗಾಹಿಗಳಿಗೆ ಉದ್ದೇಶ ಪೂರ್ವಕವಾಗಿ ಅವಮಾನಿಸಿದರೆ ಆರು ತಿಂಗಳಿಂದ ಐದು ವರ್ಷಗಳ ತನಕ ಜೈಲು ಶಿಕ್ಷೆ ಹಾಗೂ ಒಂದು ಲಕ್ಷ ರೂಪಾಯಿ ದಂಡವಿಧಿಸಲು ಮಸೂದೆ ಅವಕಾಶ ನೀಡಲಿದೆ. ಅರಣ್ಯ ಸಚಿವ ಈಶ್ವರ ಖಂಡ್ರೆ ಮಾತನಾಡಿ ಮೀಸಲು ಅರಣ್ಯ ಹೊರತು ಪಡಿಸಿ ಬೇರೆ ಅರಣ್ಯಗಳಲ್ಲಿ ಕುರಿಮೇಯಿಸಲು ಕುರಿಗಾಹಿಗಳಿಗೆ ಅವಕಾಶ ನೀಡಲಾಗಿದ್ದು. ಅರಣ್ಯ ಪ್ರವೇಶಿಸುವ ಕುರಿಗಾಹಿಗಳಿಗೆ ಯಾವುದೇ ರೀತಿಯ ತೊಂದರೆ ಕೊಡಬಾರದು ಎಂದು ಅರಣ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು. ಮಸೂದೆ ಸ್ವಾಗತಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ ಕುರಿಗಾಹಿಗಳ ಮೇಲೆ ನಿರಂತರವಾಗಿ ನಡೆಯುವ ದೌರ್ಜನ್ಯ ತಡೆಯಲು ಸರ್ಕಾರ ಕಠಿಣ ಕ್ರಮಕೈಗೊಳ್ಳಬೇಕು ಎಂದರು. ಬಳಿಕ ಮಸೂದೆಯನ್ನು ಧ್ವನಿ ಮತದಿಂದ ಅಂಗೀಕರಿಸಲಾಯಿತು.

******

ಕೊಳವೆ ಬಾವಿಗಳ ನೀರಿಗೆ ಡಿಜಿಟಲ್ ಟೆಲಿಮಿಟ್ರಿ ಅಳವಡಿಕೆ, ವಾಣಿಜ್ಯ, ಕೈಗಾರಿಕೆ, ಗಣಿಗಾರಿಕೆ, ಮೂಲಸೌಕರ್ಯಭಿವೃದ್ಧಿಗೆ ಬಳಸುವ ಕೊಳವೆಬಾವಿ ನೀರಿಗೆ ಮತ್ತು ಟ್ಯಾಂಕರ್‌ಗಳಿಗೆ ಶುಲ್ಕ ವಿಧಿಸುವ ಕರ್ನಾಟಕ ಅಂತರ್ಜಲ ಕಾಯ್ದೆ ೨೦೨೫ಕ್ಕೆ ವಿಧಾನಪರಿಷತ್‌ನಲ್ಲಿ ಅಂಗೀಕಾರ ದೊರೆತಿದೆ. ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ ವಿಧೇಯಕವನ್ನು ಸಣ್ಣ ನೀರಾವರಿ ಸಚಿವ ಬೋಸರಾಜ್ ಮಂಡನೆ ಮಾಡಿದರು. ವಿಧೇಯಕದ ಮೇಲೆ ಮಾತನಾಡಿದ ಬೋಸರಾಜ್ ೧೫ ರಾಜ್ಯಗಳು ಈಗಾಗಲೇ ಈ ಕಾಯ್ದೆ ಅನುಷ್ಠಾನಗೊಳಿಸಿವೆ. ಅಂತರ್ಜಲ ಅಭಿವೃದ್ಧಿಗೆ ಈ ವಿಧೇಯಕ ಸಹಕಾರಯಾಗಲಿದೆ. ಬೋರ್ ವೆಲ್ ಕೊರೆಯಲು ಅನುಮತಿ ಪಡೆಯುವುದು ಈ ವಿಧೇಯಕದ ಪ್ರಮುಖ ಅಂಶವಾಗಿದೆ ಎಂದರು. ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ ೨೦೨೫ಕ್ಕೆ ವಿಧಾನಪರಿಷತ್ತಿನಲ್ಲಿಂದು ಅಂಗೀಕಾರ ದೊರೆಯಿತು. ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮೇಲ್ಮನೆಯಲ್ಲಿ ವಿಧೇಯಕ ಮಂಡಿಸಿದರು. ಚರ್ಚೆ ಬಳಿಕ ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

******

ರಾಜ್ಯದೆಲ್ಲೆಡೆ ಗಣೇಶೋತ್ಸವಕ್ಕೆ ಸಂಭ್ರಮದ ತಯಾರಿ ನಡೆಯುತ್ತಿದೆ. ಬೆಂಗಳೂರಿನಲ್ಲಿ ಗಣೇಶ ಚತುರ್ಥಿ ಆಚರಣೆಗಾಗಿ ಬಿಬಿಎಂಪಿ ಪರಿಸರಸ್ನೇಹಿ ಮಾರ್ಗಸೂಚಿಗಳನ್ನು ಹೊರಡಿಸಿದೆ. ಪಿಒಪಿಯಂತಹ ನಿಷೇಧಿತ ವಸ್ತುಗಳಿಂದ ಮೂರ್ತಿ ತಯಾರಿಸಿದರೆ ಹಾಗೂ ಮಾರಾಟ ಮಾಡುವುದು ಕಂಡುಬಂದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಮಾರ್ಗಸೂಚಿಯಲ್ಲಿ ಉಲ್ಲೇಖಿಸಲಾಗಿದೆ. ನೈಸರ್ಗಿಕವಾಗಿ ಜೇಡಿಮಣ್ಣಿನಿಂದ ತಯಾರಿಸಿದ ಪರಿಸರಸ್ನೇಹಿ ಗಣೇಶ ಮೂರ್ತಿಗಳನ್ನು ಮಾತ್ರ ತಯಾರಿಸುವಂತೆ ಸೂಚನೆ ನೀಡಲಾಗಿದೆ. ಸಾರ್ವಜನಿಕ ಗಣೇಶೋತ್ಸವದ ವೇಳೆ ಮೂರ್ತಿ ಪ್ರತಿಷ್ಠಾಪನೆ ಸ್ಥಳ ಮತ್ತು ವಿಸರ್ಜನೆ ಮಾಡುವ ಸಮಯದಲ್ಲಿ ಏಕಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆ ಮಾಡದಂತೆ ಎಚ್ಚರವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪರಿಸರಕ್ಕೆ ಮಾರಕವಾಗುವ ರಾಸಾಯನಿಕ ಬಣ್ಣ, ಪಟಾಕಿ, ಪ್ಲಾಸ್ಟರ್ ಆಫ್ ಪ್ಯಾರಿಸ್ ತಯಾರಿತ ಮೂರ್ತಿಗಳ ಬಳಕೆ ಮಾಡದಂತೆ ನಿಗಾ ಇಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

******

ಕೇಂದ್ರ ಸರ್ಕಾರವು ಆನ್ ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ೨೦೨೫ ಜಾರಿಗೆ ತಂದಿರುವುದಕ್ಕೆ ಮೈಸೂರಿನ ವಿವೇಕವಂಶಿ ಫೌಂಡೇಶನ್ ಪರವಾಗಿ ಕೇಂದ್ರ ಸರ್ಕಾರಕ್ಕೆ, ಸಚಿವರಿಗೆ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೃತಜ್ಞತೆಗಳನ್ನು ಸಮರ್ಪಿಸುವುದಾಗಿ ಫೌಂಡೇಶನ್ ಸಂಸ್ಥಾಪಕ ನಿತ್ಯಾನಂದ ಎಸ್.ಬಿ. ತಿಳಿಸಿದ್ದಾರೆ. ಕಳೆದ ಹಲವಾರು ವರ್ಷಗಳಿಂದ ಸಂಸ್ಥೆಯ ವತಿಯಿಂದ ನೂರಾರು ಶಾಲಾ ಕಾಲೇಜುಗಳಿಗೆ ಮಾದಕ ವಸ್ತು, ವ್ಯಸನ ಮತ್ತು ಜೂಜಿನ ದುಷ್ಪರಿಣಾಮಗಳ ಕುರಿತಾಗಿ ಅರಿವು ಮೂಡಿಸಿ ಜಾಗೃತಿಗೊಳಿಸಲು ನಿರಂತರ ಪ್ರಯತ್ನಶೀಲರಾಗಿದ್ದೆವು. ಆದರೆ ಆನ್ ಲೈನ್ ಬೆಟ್ಟಿಂಗ್ ಚಟಕ್ಕೆ ಬಿದ್ದ ಅನೇಕ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಳ್ಳುವುದನ್ನು ನೋಡಿ ಬಹಳ ದುಃಖವಾಗುತ್ತಿತ್ತು. ಕೆಲವು ವಿದ್ಯಾರ್ಥಿಗಳು ಜೀವ ಕಳೆದುಕೊಂಡರೆ ಇನ್ನು ಕೆಲವರು ಕಳ್ಳತನ ಮಾಡಿ, ಪೊಲೀಸರ ಮುಂದೆ ತಲೆತಗ್ಗಿಸಿ ನಿಲ್ಲುತ್ತಿದ್ದರು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

****ಧ್ವನಿ ****ನಿತ್ಯಾನಂದ

******

ತುಂಗಭದ್ರಾ ಜಲಾಶಯದ ಅಚ್ಚುಕಟ್ಟು ಪ್ರದೇಶದಲ್ಲಿ ಭಾರಿ ಪ್ರಮಾಣದ ಮಳೆಯಾಗುತ್ತಿರುವುದರಿಂದ ಕಳೆದ ೨೪ ಗಂಟೆಗಳಲ್ಲಿ ಜಲಾಶಯಕ್ಕೆ ಒಂದು ಲಕ್ಷ ೨೮ ಸಾವಿರ ಕ್ಯೂಸೆಕ್ ನೀರು ಹರಿದು ಬಂದಿದೆ. ತುಂಗಭದ್ರಾ ಜಲಾಶಯದಿಂದ ೧ ಲಕ್ಷದ ೨೮ ಸಾವಿರ ಕ್ಯೂಸೆಕ್‌ಗಿಂತ ಅಧಿಕ ಪ್ರಮಾಣದ ನೀರನ್ನು ಹೊರ ಬಿಡಲಾಗಿದ್ದು, ಹಂಪಿಯ ಪುರಂದರ ಮಂಟಪ, ಸ್ನಾನಘಟ್ಟ ವಿಧಿ ವಿಧಾನದ ಸಾಲುಮಂಟಪಗಳು, ಕೋದಂಡರಾಮ ದೇವಸ್ಥಾನ ಸೇರಿದಂತೆ ಹಂಪಿಯ ಬಹುತೇಕ ಸ್ಮಾರಕಗಳು ಮುಳುಗಡೆಯಾಗಿವೆ.

******